# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 581 |
| ಮಾನ್ಯ ಸದಸ್ಯರ ಹೆಸರು: | ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ: | 22/07/2019 |
| ಉತ್ತರಿಸುವ ಸಚಿವರು: | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಜಾತಿ ಜನಗಣತಿಯ ವಿವರಗಳನ್ನು ಇನ್ನೂ ಕೂಡ ಪ್ರಕಟಿಸದಿರಲು ಕಾರಣವೇನು; | ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ವರದಿಯನ್ನು ಸಿದ್ಧಪಡಿಸಿದೆ. ಆಯೋಗದಿಂದ ವರದಿಯು ಸರ್ಕಾರದಲ್ಲಿ ಸ್ವೀಕೃತಗೊಂಡ ನಂತರ ವರದಿಯಲ್ಲಿನ ವಿವರಗಳನ್ನು ಪ್ರಕಟಿಸುವ ಬಗ್ಗೆ ಕ್ರಮವಹಿಸಲಾಗುವುದು. |
| ಆ) | ಜಾತಿ ಜನಗಣತಿ ಪ್ರಕಟಿಸಿದರೆ ಈಗಿರುವ ಜಾತಿಗಳಲ್ಲಿ ಜನಸಂಖ್ಯೆ ಕಡಿಮೆಯಾಗುತ್ತಿದೆಯೇ; | ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ವರದಿಯು ಸರ್ಕಾರದಲ್ಲಿ ಸ್ವೀಕೃತವಾಗಿರುವುದಿಲ್ಲ. |
| ಇ) | ಹಿಂದುಳಿದ ವರ್ಗಗಳಲ್ಲಿ ಅತಿ ಕಡಿಮೆ ಜನ ಸಂಖ್ಯೆಯಿರುವ ಜಾತಿಗಳಿಗೆ ಸಾಮಾಜಿಕ ನ್ಯಾಯ ದೊರಕಿಸಿ ಕೊಡಲು ಸರ್ಕಾರದ ಕ್ರಮಗಳೇನು; | ಹಿಂದುಳಿದ ವರ್ಗಗಳ ಸರ್ವೋತೋಮುಖ ಅಭಿವೃದ್ಧಿಗಾಗಿ ಕಾರ್ಯಕ್ರಮಗಳನ್ನು/ ಯೋಜನೆಗಳನ್ನು ರೂಪಿಸಲು ಹಾಗೂ ಸಾಮಾಜಿಕ ನ್ಯಾಯ ದೊರಕಿಸಿಕೊಡುವ ಉದ್ದೇಶದಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ನಡೆಸಲಾಗಿದೆ. ಅದರಂತೆ ವರದಿ ಸಿದ್ಧಪಡಿಸಲಾಗಿದೆ. ಆಯೋಗವು ಸರ್ಕಾರಕ್ಕೆ ವರದಿ ಸಲ್ಲಿಸಿದ ನಂತರ ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು. |
| ಈ) | ಸರ್ಕಾರ ಜಾತಿ ಜನಗಣತಿಗಾಗಿ ಒಟ್ಟು ಖರ್ಚು ಮಾಡಿರುವ ಹಣವೆಷ್ಟು? | ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗಾಗಿ ಇದುವರೆವಿಗೂ ರೂ.162.52 ಕೋಟಿಗಳನ್ನು ಖರ್ಚು ಮಾಡಲಾಗಿದೆ. |

ಸಂಖ್ಯೆ: ಹಿಂವಕ 64 ಬಿಸಿಎ 2019

(ಸಿ. ಪುಟ್ಟರಂಗಶೆಟ್ಟಿ)
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.